ಬಸ್ಸುಗಳನ್ನು ಪ್ರವರ್ತಿಸಲು ಕ್ರಮ ಕೈಗೊಳ್ಳಲಾಗಿದೆ. ರಾಷ್ಟ್ರೀಕೃತ ಹೆದ್ದಾರಿಗಳಲ್ಲೂ ಸಹ ಹೆಚ್ಚಿನ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್‌ಗಳನ್ನು ಏರ್ಪಡಿಸುವ ಬಗೆಗೆ ಪರಿಶೀಲಿಸಲಾಗುತ್ತಿದೆ.

ಶಿವಮೊಗ್ಗ ತಾಲ್ಲೂಕು ಕಛೇರಿಯ ದುರಸ್ತಿ ಹಾಗೂ ಮಿನಿ ವಿಧಾನಸೌಧ ನಿರ್ಮಾಣ.

1535(2206) ಶ್ರೀ ಕೆ.ಎಸ್. ಈಶ್ವರಪ್ಪ (ಶಿವಮೊಗ್ಗ) :— ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಶಿವಮೊಗ್ಗ ತಾಲ್ಲೂಕು ಕಛೇರಿ ಕಟ್ಟಡ ತುಂಬಾ ನಾಡುರಸ್ತಾಗಿದ್ದು ಮಳೆಗಾಲದಲ್ಲಿ ಅಲ್ಲಿ ಕೆಲಸ ನಿರ್ವಹಿಸಲು ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಶಿವಮೊಗ್ಗ ಮಿನಿ ವಿಧಾನಸೌಧ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆಯೇ

ಇ) ಹಾಗಿದ್ದಲ್ಲಿ, ಮಿನಿ ವಿಧಾನಸೌಧ ನಿರ್ಮಾಣ ಕಾರ್ಯವನ್ನು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಬಿ. ಸೋಮಶೇಖರ್ (ಕಂದಾಯ ಸಚಿವರು) :—

ಅ) ಬಂದಿದೆ.

ಆ) ರಾಜ್ಯದಲ್ಲಿನ ಬಾಕಿ ಉಳಿದಿರುವ ತಾಲ್ಲೂಕುಗಳಲ್ಲಿ ಮಿನಿ ವಿಧಾನಸೌಧಗಳನ್ನು ನಿರ್ಮಿಸುವ ಬಗ್ಗೆ ಹುಡ್ಕೋ ಸಂಸ್ಥೆಯಿಂದ ಸಾಲವನ್ನು ಪಡೆಯಲು ಪರಿಶೀಲಿಸಲಾಗುತ್ತಿದೆ. ಈ ಬಗ್ಗೆ ಅಂತಿಮ ತೀರ್ಮಾನ ತೆಗೆದುಕೊಂಡ ನಂತರ ಶಿವಮೊಗ್ಗದಲ್ಲಿ ಮಿನಿ ವಿಧಾನಸೌಧ ನಿರ್ಮಿಸಲು ಪರಿಶೀಲಿಸಲಾಗುವುದು.

ಇ) ಸಧ್ಯಕ್ಕೆ ಉದ್ಭವಿಸುವುದಿಲ್ಲ.

ಸಾರಿಗೆ ಇಲಾಖೆ ಮುಖಾಂತರ ರಾಜಸ್ವ ವಸೂಲಾತಿ.

1536(2217) ಶ್ರೀ ಕೆ. ಜಯರಾಮಶೆಟ್ಟಿ (ಉಳ್ಳಾಲ) :— ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯ ಪ್ರಾದೇಶಿಕ ಸಾರಿಗೆ ಇಲಾಖೆ ಮುಖಾಂತರ ಕಳೆದ ಎರಡು ವರ್ಷಗಳಲ್ಲಿ ವಸೂಲಾದ ರಾಜಸ್ವ (ಮೋಟಾರು ವೆಹಿಕಲ್ ಟ್ಯಾಕ್ಸ್ ಎಷ್ಟು? (ಜಿಲ್ಲಾವಾರು ಮಾಹಿತಿ ನೀಡುವುದು)